ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ರಾಷ್ಟ್ರೀಯ ಬಾಲವಾಡಿ ಯೋಜನೆ

(National Creche Scheme)

ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

479 (565) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲಿಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮನೆ ಕೆಲಸಗಾರರ ಸಂಖ್ಯೆ ಅದರಲ್ಲೂ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಗಣನೀಯ ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ವಿವರ ನೀಡುವುದು)

(ಆ) ಈ ಮನೆ ಕೆಲಸಗಾರರ ಮಕ್ಕಳ ಆರೈಕೆಗಾಗಿ ಸಹಾಯ ಧನವನ್ನು ರಾಜ್ಯ ಸರ್ಕಾರ ನೀಡುತ್ತಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

( ಇ) ರಾಜ್ಯ ಸರ್ಕಾರ "ರಾಷ್ಟ್ರೀಯ ಬಾಲವಾಡಿ ಯೋಜನೆ" (National Creche Scheme) ಯನ್ನು ರಾಜ್ಯದಲ್ಲಿ ಜಾರಿಗೆ ತಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆ ಅಡಿಯಲ್ಲಿ ನೀಡಬೇಕಾಗಿರುವ ಸಹಾಯ ಧನ ನೀಡುವಲ್ಲಿ ವಿಳಂಬ ಆಗಿರುವುದರಿಂದ ಮತ್ತು ಅಸ್ತಿತ್ವದಲ್ಲಿ ಇಲ್ಲದೆ ರಾಜ್ಯದಲ್ಲಿ ಹಲವಾರು ಬಾಲವಾಡಿ ಶಾಲೆಗಳು ಮುಚ್ಚಿ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು)